All India Radio: Bangalore
National Bulletin In Kannada
15.02.2026  7.35  am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<>><><*><><<>

ಮುಖ್ಯಾಂಶಗಳು

೧.    ಬಹುಮಾರ್ಗ ರೈಲು ಯೋಜನೆಗಳಿಗೆ ಕೇಂದ್ರ ಸಂಪುಟ ಸಮಿತಿಯ ಅನುಮೋದನೆಯಿಂದ ರೈಲು ಮೂಲಸೌಕರ್ಯಕ್ಕೆ ಬಲ- ಪ್ರಧಾನಿ ನರೇಂದ್ರ ಮೋದಿ

೨.    ಇಂದು ದೇಶಾದ್ಯಂತ ಮಹಾಶಿವರಾತ್ರಿ ಸಂಭ್ರಮ; ಶೈವಕ್ಷೇತ್ರಗಳಲ್ಲಿ ವಿಶೇಷ ಪೂಜಾಕೈಂಕರ್ಯ; ಎಲ್ಲೆಡೆ ಶಿವಸ್ಮರಣೆ

೩.    ಮ್ಯೂನಿಕ್‌ನಲ್ಲಿ ವಿದೇಶಾಂಗ  ಸಚಿವ ಡಾ.ಎಸ್.ಜೈಶಂಕರ್ ಜರ್ಮನ್ ವಿದೇಶಾಂಗ ಸಚಿವರೊಂದಿಗೆ ದ್ವಿಪಕ್ಷೀಯ ಸಭೆ

೪.    ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್: ಕೊಲೊಂಬೋದಲ್ಲಿಂದು ಭಾರತ-ಪಾಕಿಸ್ತಾನ ಹಣಾಹಣಿ

<>><><*><><<>

ದೆಹಲಿ, ಹರಿಯಾಣ, ಮಹಾರಾಷ್ಟ್ರ ಮತ್ತು ಕರ್ನಾಟಕದಾದ್ಯಂತ ವಿವಿಧ ಜಿಲ್ಲೆಗಳನ್ನು ಒಳಗೊಂಡ ಮೂರು ಬಹುಪಥ ಯೋಜನೆಗಳಿಗೆ ಸಂಪುಟ ಅನುಮೋದನೆ ರೈಲು ಮೂಲಸೌಕರ್ಯವನ್ನು ಬಲಪಡಿಸುತ್ತದೆ, ಸರಕು ವೆಚ್ಚವನ್ನು ಕಡಿಮೆ ಮಾಡುತ್ತದೆ ಮತ್ತು ಯುವಕರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಹೈದರಾಬಾದ್-ಪಣಜಿ ಆರ್ಥಿಕ ಕಾರಿಡಾರ್‌ನಲ್ಲಿ ಗುಡೇಬೆಳ್ಳೂರಿನಿಂದ ಮೆಹಬೂಬ್‌ನಗರಕ್ಕೆ ರಾಷ್ಟ್ರೀಯ ಹೆದ್ದಾರಿ-೧೬೭ ರ ಅಗಲೀಕರಣ ನಿರ್ಧಾರವು ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸುತ್ತದೆ, ಉದ್ಯೋಗವನ್ನು ಸೃಷ್ಟಿಸುತ್ತದೆ ಮತ್ತು ಜೀವನ ಸುಗಮಗೊಳಿಸುತ್ತದೆ ಎಂದು ಹೇಳಿದರು. ಗೋಹ್‌ಪುರ ಮತ್ತು ನುಮಲಿಗಢ ನಡುವಿನ ಚತುಷ್ಪಥ ಪ್ರವೇಶ-ನಿಯಂತ್ರಿತ ಗ್ರೀನ್‌ಫೀಲ್ಡ್ ಕಾರಿಡಾರ್ ಅನ್ನು ಸಂಪುಟ ಅನುಮೋದಿಸಿದೆ. ಇದರಲ್ಲಿ ಬ್ರಹ್ಮಪುತ್ರದ ಅಡಿಯಲ್ಲಿ ಭಾರತದ ಮೊದಲ ನೀರೊಳಗಿನ ರಸ್ತೆ ಮತ್ತು ರೈಲು ಸುರಂಗವೂ ಸೇರಿದೆ. ಈ ಪರಿವರ್ತನಾತ್ಮಕ ಯೋಜನೆಯು ಸಂಪರ್ಕವನ್ನು ಹೆಚ್ಚಿಸುತ್ತದೆ, ಸರಕು ವೆಚ್ಚವನ್ನು ಕಡಿಮೆ ಮಾಡುತ್ತದೆ ಹಾಗೂ ಅಸ್ಸಾಂ ಮತ್ತು ಇಡೀ ಈಶಾನ್ಯ ಪ್ರದೇಶದಾದ್ಯಂತ ಬೆಳವಣಿಗೆಯನ್ನು ವೇಗಗೊಳಿಸುತ್ತದೆ ಎಂದು

ಅವರು ಹೇಳಿದರು. ನೋಯ್ಡಾ ಸೆಕ್ಟರ್ ೧೪೨ ರಿಂದ ಬೊಟಾನಿಕಲ್ ಗಾರ್ಡನ್‌ವರೆಗಿನ ವಿಸ್ತರಣಾ ಕಾರಿಡಾರ್‌ಗೆ ಸಂಪುಟ ಅನುಮೋದನೆ ನೀಡಿದೆ. ಈ ನಿರ್ಧಾರವು ನೋಯ್ಡಾದ ಅಭಿವೃದ್ಧಿ ಪಯಣಕ್ಕೆ ವೇಗವನ್ನು ನೀಡುತ್ತದೆ ಎಂದು ಪ್ರಧಾನಿ ಹೇಳಿದರು.

<>><><*><><<>

ಪ್ರಧಾನಿ ನರೇಂದ್ರ ಮೋದಿ ನಿನ್ನೆ ಅಸ್ಸಾಂನಲ್ಲಿ ೫ ಸಾವಿರದ ೪೫೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಹಲವಾರು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ ಚಾಲನೆ ನೀಡಿದರು. ಕಳೆದ ೧೧ ವರ್ಷಗಳಲ್ಲಿ ಈಶಾನ್ಯ ಪ್ರದೇಶಕ್ಕೆ ೫.೫ ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ಹಣವನ್ನು ಹಂಚಿಕೆ ಮಾಡಲಾಗಿದೆ ಮತ್ತು ಈ ಪ್ರದೇಶದ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಅಭೂತಪೂರ್ವ ಅಭಿವೃದ್ಧಿಯನ್ನು ಕಾಣಬಹುದು ಎಂದು ಪ್ರಧಾನಿ ಹೇಳಿದರು.

ಧ್ವನಿ: ಪಿಎಂ ಪ್ರಧಾನಿ

<>><><*><><<>

ದೇಶಾದ್ಯಂತ ಇಂದು ಮಹಾಶಿವರಾತ್ರಿ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ಈ ದಿನವನ್ನು ಉಪವಾಸ, ವಿಶೇಷ ಪ್ರಾರ್ಥನೆ ಮತ್ತು ರಾತ್ರಿಯಿಡೀ ಪೂಜೆಯಿಂದ ಗುರುತಿಸಲಾಗುತ್ತದೆ. ವಿಶೇಷವಾಗಿ ಶೈವ ಕ್ಷೇತ್ರಗಳಲ್ಲಿ ಇಂದು ಪೂಜಾಕೈಂಕರ್ಯ, ಶಿವಸ್ಮರಣೆ, ಬಿಲ್ವಾರ್ಚನೆಗಳು ನಡೆಯುತ್ತಿರುವೆ. ಪ್ರಮುಖ ಶೈವಕ್ಷೇತ್ರಗಳಲ್ಲಿ ಅಹೋರಾತ್ರಿ ಭಜನೆ, ಸಂಕೀರ್ತನೆ ವ್ಯವಸ್ಥೆಯಾಗಿವೆ. ಹಲವೆಡೆ ವಿಶೇಷ ಪೂಜಾ, ಹೋಮ, ಜಾಗರಣೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ವಿವಿಧ ಶೈವಕ್ಷೇತ್ರಗಳಲ್ಲಿ ಜಾಗರಣೆಗಳಿಗೆ ವಿಶೇಷ ಮಹತ್ವ ದೊರೆತಿದ್ದು, ಸಹಸ್ರಾರು ಭಕ್ತರು ಶಿವನ ಲಿಂಗಾಭಿಷೇಕ, ಬಿಲ್ವಾರ್ಚನೆ ಹಾಗೂ ಮಹಾರಾತ್ರಿ ನಾಲ್ಕು ಕಾಲದ ಪೂಜೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ದೇವಾಲಯಗಳಲ್ಲಿ ರುದ್ರಾಭಿಷೇಕ, ರುದ್ರಪಾರಾಯಣೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಗಳು ನಡೆಯುತ್ತಿವೆ. ಶಿವರಾತ್ರಿ ಪ್ರಯುಕ್ತ ಉಪವಾಸಾಚರಣೆ ಹಾಗೂ ಭಜನೆ, ಕೀರ್ತನೆಗಳಲ್ಲಿ ತೊಡಗಿಸಿಕೊಳ್ಳುವುದರ ಮೂಲಕ ಭಕ್ತರು ಜಾಗರಣೆಯಿದ್ದು, ಶಿವನ ಕೃಪೆಗೆ ಪಾತ್ರರಾಗುವರು.

<>><><*><><<>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಗಾಂಧಿನಗರದ ಮಹಾತ್ಮ ಮಂದಿರದಲ್ಲಿ ಭಾರತದ ಮೊದಲ ಕೇಂದ್ರೀಯ ಬ್ಯಾಂಕ್ ಡಿಜಿಟಲ್ ಕರೆನ್ಸಿ ಆಧಾರಿತ ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಉದ್ಘಾಟಿಸಲಿದ್ದಾರೆ. ಗುಜರಾತ್ ಸರ್ಕಾರದ ಈ ಡಿಜಿಟಲ್ ಕರೆನ್ಸಿ ಉಪಕ್ರಮವು ಆಹಾರ ಧಾನ್ಯಗಳ ವಿತರಣೆಯನ್ನು ಹೆಚ್ಚು ಪಾರದರ್ಶಕ ಮತ್ತು ಸೋರಿಕೆ ನಿರೋಧಕವಾಗಿಸುವ

ಗುರಿಯನ್ನು ಹೊಂದಿದೆ. ಈ ಕಾರ್ಯಕ್ರಮವು, ರಾಜ್ಯದ ಆಹಾರ ಭದ್ರತಾ ಜಾಲವನ್ನು ಬಲಪಡಿಸಲು ಧಾನ್ಯ ಎಟಿಎಂಗಳು ಮತ್ತು ವಿಶೇಷ ಪೌಷ್ಟಿಕಾಂಶ ಅಭಿಯಾನಗಳನ್ನು ಪರಿಚಯಿಸುವುದನ್ನು ಸಹ ಗುರುತಿಸುತ್ತದೆ.

<>><><*><><<>

ಭಾರತೀಯ ರೈಲ್ವೆ, ಮುಂದಿನ ಮೂರು ವರ್ಷಗಳ ಒಳಗೆ ೧೨೪ ವಿವಿಧ ಮಾದರಿಯ ಸರಕು ನಿಲ್ದಾಣಗಳನ್ನು ಅಭಿವೃದ್ಧಿಪಡಿಸಲಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಅವರು, ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರಯಾಣಿಕರಿಗೆ ಸ್ವಚ್ಛ ಹಾಗೂ ನಿರ್ಮಲ ಪ್ರಯಾಣದ ಅನುಭವ ನೀಡಲು ಆದ್ಯತೆ ನೀಡಲಾಗುವುದು ಎಂದರು. ಈ ನಿಟ್ಟಿನಲ್ಲಿ ಉತ್ತಮ ಅನುಭವ ಹೊಂದಿರುವ ಪ್ರಮುಖ ಸೇವಾ ಸೌಲಭ್ಯ ಸಂಸ್ಥೆಗಳನ್ನು ನಿಯೋಜಿಸಲಾಗುವುದು ಎಂದರು.

<>><><*><><<>

ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಮ್ಯೂನಿಕ್ ಭದ್ರತಾ ಸಮ್ಮೇಳನದ ಸಂದರ್ಭದಲ್ಲಿ ನಿನ್ನೆ ಜರ್ಮನ್ ವಿದೇಶಾಂಗ ಸಚಿವ ಜೋಹಾನ್ ವಾಡೆಫುಲ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್ ಸಭೆಯಲ್ಲಿ, ವಿವಿಧ ಕ್ಷೇತ್ರಗಳ ಸಹಕಾರದಲ್ಲಿನ ಪ್ರಗತಿಯನ್ನು ನಿರ್ಣಯಿಸಿದರು ಮತ್ತು ಪ್ರಾದೇಶಿಕ ತಾಣಗಳ ಬಗ್ಗೆ ಚರ್ಚಿಸಿದರು ಎಂದು ಹೇಳಿದರು. ಡಾ.ಎಸ್.ಜೈಶಂಕರ್, ಕೆನಡಾದ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರನ್ನು ಭೇಟಿ ಮಾಡಿ, ಭಾರತ-ಕೆನಡಾ ಸಂಬಂಧಗಳ ಪ್ರಗತಿ ಪರಿಶೀಲನೆ ನಡೆಸಿದರು. ವಿದೇಶಾಂಗ ಸಚಿವರು, ಜೆಕ್ ಗಣರಾಜ್ಯದ ಉಪ ಪ್ರಧಾನಮಂತ್ರಿ ಮತ್ತು ವಿದೇಶಾಂಗ ಸಚಿವರಾದ ಪೆಟ್ರ್ ಫಿಯಾಲಾ ಅವರನ್ನು ಭೇಟಿ ಮಾಡಿ ಆರ್ಥಿಕ ಮತ್ತು ರಕ್ಷಣಾ ಸಹಕಾರವನ್ನು ಬಲಪಡಿಸುವ ಬಗ್ಗೆ ಚರ್ಚಿಸಿದರು.

<>><><*><><<>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಜರ್ಮನಿಯ ಮ್ಯೂನಿಕ್‌ನಲ್ಲಿ ನಿನ್ನೆ ಬವೇರಿಯಾದ ಐರೋಪ್ಯ ಮತ್ತು ಅಂತಾರಾಷ್ಟ್ರೀಯ ವ್ಯವಹಾರಗಳ ಸಚಿವ ಎರಿಕ್ ಬೀಸ್ಟೆಂಗರ್ ಅವರನ್ನು ಭೇಟಿ ಮಾಡಿದರು. ಈ ವರ್ಷದ ಜನವರಿಯಲ್ಲಿ ಜರ್ಮನ್ ಚಾನ್ಸೆಲರ್ ಇತ್ತೀಚೆಗೆ ಭಾರತಕ್ಕೆ ಭೇಟಿ ನೀಡಿದ ಹಿನ್ನೆಲೆಯಲ್ಲಿ, ಎರಡೂ ರಾಷ್ಟ್ರಗಳು ಬೆಳೆಯುತ್ತಿರುವ ದ್ವಿಪಕ್ಷೀಯ ಪಾಲುದಾರಿಕೆಯ ಬಗ್ಗೆ ಉಭಯ ನಾಯಕರು ಚರ್ಚಿಸಿರುವುದಾಗಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಈ ಭೇಟಿಯ ವೇಳೆ, ಇತ್ತೀಚೆಗೆ

ಮುಕ್ತಾಯಗೊಂಡ ಭಾರತ-ಐರೋಪ್ಯ ಒಕ್ಕೂಟದ ಮುಕ್ತ ವ್ಯಾಪಾರದ ಬಗ್ಗೆಯೂ ಚರ್ಚಿಸಲಾಯಿತು. ಹಸಿರು ಮತ್ತು ಸುಸ್ಥಿರ ಪಾಲುದಾರಿಕೆಯ ಮೂಲಕ ಹವಾಮಾನ ಹಣಕಾಸುಗಾಗಿ ಮಾರ್ಗಗಳನ್ನು ಸಚಿವರು ಅನ್ವೇಷಿಸಿದರು.

<>><><*><><<>

ಮುಲುಂದ್‌ನಲ್ಲಿ ಮೆಟ್ರೋ ಲೈನ್ ೪ ನಲ್ಲಿ ಸಂಭವಿಸಿದ ಅಪಘಾತದ ನಂತರ ಕಾರ್ಯನಿರ್ವಾಹಕ ಎಂಜಿನಿಯರ್ ಸತ್ಯಜಿತ್ ಸಾಲ್ವೆ ಅವರನ್ನು ತಕ್ಷಣ ಅಮಾನತುಗೊಳಿಸಲು ಮಹಾರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಆದೇಶಿಸಿದ್ದಾರೆ. ಘಟನೆಯಲ್ಲಿ ಒಬ್ಬರು ಸಾವನ್ನಪ್ಪಿದ್ದು, ಇತರ ಮೂವರು ಗಾಯಗೊಂಡಿದ್ದರು. ಮೃತರ ಕುಟುಂಬಕ್ಕೆ ಸಂತಾಪ ಸೂಚಿಸಿದ ಉಪಮುಖ್ಯಮಂತ್ರಿ, ಗಾಯಗೊಂಡವರ ವೈದ್ಯಕೀಯ ವೆಚ್ಚವನ್ನು ಮುಂಬೈ ಮೆಟ್ರೋಪಾಲಿಟನ್ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ-ಎಂಎಂಆರ್‌ಡಿಎ ಭರಿಸಲಿದೆ ಎಂದು ಹೇಳಿದರು. ನಿರ್ಮಾಣ ಹಂತದಲ್ಲಿರುವ ಮುಂಬೈ ಮೆಟ್ರೋ ಲೈನ್ ೪ ಕಾರಿಡಾರ್‌ನ ಪೈಯರ್-ಪಿ-೧೯೭ ಬಳಿ ಪ್ಯಾರಪೆಟ್ ವಿಭಾಗದ ಕುಸಿತದ ಬಗ್ಗೆ ಎಂಎಂಆರ್‌ಡಿಎ ಉನ್ನತ ಮಟ್ಟದ ತನಿಖೆಯನ್ನು ಸಹ ನಡೆಸುತ್ತಿದೆ.

<>><><*><><<>

ಬುಡಮಟ್ಟದಲ್ಲಿ ತಂತ್ರಜ್ಞಾನ ವರ್ಗಾವಣೆ ಖಾತರಿಪಡಿಸುವ ಮೂಲಕ ಭಾರತ ಜಾಗತಿಕ ದಕ್ಷಿಣದ ಧ್ವನಿಯಾಗಿ ನಿಲ್ಲಲಿದೆ ಎಂದು ಕೇಂದ್ರ ವಿದ್ಯುನ್ಮಾನ ಹಾಗೂ ಮಾಹಿತಿ ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ್ ಹೇಳಿದ್ದಾರೆ. ಅವರು, ನವದೆಹಲಿಯಲ್ಲಿ ನಿನ್ನೆ ಕಾರ್ಯಕ್ರಮವೊಂದರಲ್ಲಿ ಮಾತನಾಡಿ, ಕೃತಕಬುದ್ಧಿಮತ್ತೆ ಅಂತರವನ್ನು ನಿವಾರಿಸುವ ಅಗತ್ಯವಿದೆ ಎಂದು ತಿಳಿಸಿದರು. ಮೊಬೈಲ್ ಮತ್ತು ಸಾಮಾಜಿಕ ಮಾಧ್ಯಮಗಳಿಂದ ಯುವಬಳಕೆದಾರರನ್ನು ಸಂರಕ್ಷಿಸಬೇಕೆಂದು ಹೇಳಿದ ಸಚಿವರು, ಆನ್‌ಲೈನ್ ಜೂಜು ತಡೆಗಟ್ಟಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಿರ್ಧಾರಾತ್ಮಕ ಕ್ರಮ ಕೈಗೊಳ್ಳಲಾಗಿದೆ ಎಂದರು.

<>><><*><><<>

ಕೊಲೊಂಬೋದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಎ ಗುಂಪಿನ ಪಂದ್ಯದಲ್ಲಿ ಭಾರತ ತಂಡ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಲಿದೆ, ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಪ್ರಾರಂಭವಾಗಲಿದೆ.  ಉಭಯ ತಂಡಗಳು ಎರಡು ಪಂದ್ಯಗಳಿಂದ ತಲಾ ೪ ಅಂಕಗಳನ್ನು ಗಳಿಸಿವೆ.  ಇದಕ್ಕೂ ಮೊದಲ ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಬೆಳಿಗ್ಗೆ ೧೧ ಗಂಟೆಗೆ ಆರಂಭವಾಗಲಿರುವ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡ ನೇಪಾಳವನ್ನು ಎದುರಿಸಲಿದೆ. ಬಳಿಕ

ಮಧ್ಯಾಹ್ನ ೩ ಗಂಟೆಗೆ ಚೆನ್ನೈನಲ್ಲಿ ನಡೆಯಲಿರುವ ಪಂದ್ಯದಲ್ಲಿ ಅಮೆರಿಕ ಹಾಗೂ ನಮಿಬಿಯಾ ಮುಖಾಮುಖಿಯಾಗಲಿವೆ. ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ ನ್ಯೂಜಿಲೆಂಡ್ ತಂಡವನ್ನು ೬ ವಿಕೆಟ್‌ಗಳಿಂದ ಮಣಿಸಿದೆ.

<>><><*><><<>

ಅಮೆರಿಕದ ಸಿಡ್ನಿಯಲ್ಲಿ ಇಂದು ಆರಂಭಾಗುತ್ತಿರುವ ಮೂರು ಪಂದ್ಯಗಳ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ಮೊದಲನೇ ಪಂದ್ಯದಲ್ಲಿಂದು ಭಾರತ ಹಾಗೂ ಆಸ್ಟ್ರೇಲಿಯಾ ವನಿತಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಅಪರಾಹ್ನ ೧.೪೫ ಕ್ಕೆ ಆರಂಭವಾಗಲಿದೆ.

<>><><*><><<>

ಭಾರತದ ಪ್ರಮೋದ್ ಭಗತ್, ಬಿಡಬ್ಲ್ಯುಎಫ್ ಪ್ಯಾರ ಬ್ಯಾಡ್ಮಿಂಟನ್ ವಿಶ್ವ ಚಾಂಪಿಯನ್‌ಶಿಪ್‌ನ ಪುರುಷರ ಎಸ್‌ಎಲ್-೩ ವಿಭಾಗದಲ್ಲಿ ಚಿನ್ನದ ಪದಕ ಗೆದ್ದಿದ್ದಾರೆ. ಬಹ್ರೈನ್‌ನಲ್ಲಿ ನಿನ್ನೆ ನಡೆದ ಅಂತಿಮ ಪಂದ್ಯದಲ್ಲಿ ೩೬ ವರ್ಷದ ಪ್ರಮೋದ್ ಭಗತ್ ಇಂಡೋನೇಷಿಯಾದ ಮೊಹಮ್ಮದ್ ಅಲ್ ಇಮ್ರಾನ್ ಅವರನ್ನು ೨೧-೧೨, ೨೧-೧೮ ಅಂತರದಲ್ಲಿ ಪರಾಭವಗೊಳಿಸಿದರು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>